# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ


**ಸುಭಾಷಿತ:**

ಸಾಗರವ ದಾಟಲು ದೋಣಿ ಬೇಕು
● ದೋಣಿಯ ಸಾಗಿಸಲು ನಾವಿಕ ಬೇಕು..
ಮೋಡವ ಸರಿಸಲು ಸೂರ್ಯ ಬೇಕು
● ಸೂರ್ಯನ ಕಿರಣಗಳು ಪಸರಿಸಲೇಬೇಕು
ಲೋಕ ಉಳಿಯಲು ಪ್ರಕೃತಿ ಬೇಕು
● ಪ್ರಕೃತಿಯ ಉಳಿಸಲು ಎಲ್ಲರು ಪ್ರಯತ್ನಿಸಬೇಕು..
ಉಪಕಾರ ಮಾಡಲು ಮನಸ್ಸು ಬೇಕು
● ಮನಸ್ಸನ್ನು ಕ್ರೋಢಿಕರಿಸಲು ಮಾನವನಾಗಬೇಕು..
ಮಾನವನಾಗಲು ಭಗವಂತನ ಕೃಪೆ ಬೇಕು
● ಭಗವಂತನ ಒಲಿಸಲು ನಾಮಸ್ಮರಣೆ ಮಾಡಬೇಕು..

**ಭಗವಾನ್ ಶ್ರೀಕೃಷ್ಣ**




PRGI No: KNKAN/25/A2498 www.karavalitharangini.com KARAVALI THARANGINI KANNADA Weekly Dakshina Kannada ದಿನಾಂಕ: 19-06-2026 to 25-06-2026 ಬೆಲೆ:10-00 ಸಂಪುಟ–1 ಸಂಚಿಕೆ–38 ಪುಟಗಳು–6










ಪ್ರಕೃತಿ ದೇವಿಯ ಮಡಿಲಲ್ಲಿರುವ ಕರ್ನಾಟಕದ ಕರಾವಳಿ ತೀರ, ಅದರಲ್ಲೂ ವಿಶೇಷವಾಗಿ ಮಂಗಳೂರು ವಲಯವು ಪ್ರವಾಸೋದ್ಯಮದ ದೃಷ್ಟಿಯಿಂದ ಅದ್ಭುತ ಸಾಮರ್ಥ್ಯವನ್ನು ಹೊಂದಿದೆ. ಆದರೆ, ಸಮಗ್ರ ಅಭಿವೃದ್ಧಿಯ ಕೊರತೆಯಿಂದಾಗಿ ಈ ಭಾಗದ ಪ್ರವಾಸೋದ್ಯಮವು ಇನ್ನೂ ಶೈಶವ ಅವಸ್ಥೆಯಲ್ಲೇ ಉಳಿದಿರುವುದು ವಿಪರ್ಯಾಸ. ಮಂಗಳೂರಿನಾದ್ಯಂತ ಹರಡಿಕೊಂಡಿರುವ ಸುಂದರ ಬ್ಯಾಕ್‌ವಾಟರ್ ಪ್ರದೇಶಗಳು ಪ್ರವಾಸಿಗರನ್ನು ಆಕರ್ಷಿಸುವ ಭಾರಿ ಸಾಮರ್ಥ್ಯ ಹೊಂದಿದ್ದರೂ, ಅವುಗಳನ್ನು ಪ್ರವಾಸೋದ್ಯಮದ ನಕ್ಷೆಯಲ್ಲಿ ಸೇರಿಸುವಲ್ಲಿ ಸಂಬಂಧಪಟ್ಟ ಇಲಾಖೆಗಳು ವಿಫಲವಾಗಿವೆ. ದೋಣಿ ವಿಹಾರ ಸೇರಿದಂತೆ ಜಲಕ್ರೀಡೆಗಳಿಗೆ ಸೂಕ್ತವಾದ ಮೂಲ ಸೌಕರ್ಯಗಳನ್ನು ಕಲ್ಪಿಸುವುದರೊಂದಿಗೆ ಇತಿಹಾಸ ಪ್ರಸಿದ್ಧ ದೇವಾಲಯಗಳು, ಸಾಹಸಿ ಪ್ರವಾಸಿಗರಿಗಾಗಿ ಟ್ರೆಕ್ಕಿಂಗ್ ತಾಣಗಳು ಮತ್ತು ಮೈಮನಸೋಲಿಸುವ ಕಡಲ ತೀರಗಳು ನಮ್ಮ ಕರಾವಳಿಯ ಸೊತ್ತಾಗಿದ್ದು, ಈ ಪ್ರದೇಶಗಳು ಪ್ರವಾಸಿಗರ ಸ್ವರ್ಗವಾಗಬಲ್ಲವು.

## ಮಳೆ ಅನಿಶ್ಚಿತತೆ: ಬರಗಾಲದ ಭೀತಿಯೇ?



**ಮಂಗಳೂರು:** ಜಾಗತಿಕ ಹವಾಮಾನ ವಿದ್ಯಮಾನವಾದ ಎಲ್ ನಿನೋ ಪ್ರತಿ ಬಾರಿಯೂ ಭಾರತದ ಕೃಷಿ ವಲಯದಲ್ಲಿ ಆತಂಕದ ಛಾಯೆಯನ್ನು ಮೂಡಿಸುವುದು ವಾಡಿಕೆ. ಪೆಸಿಫಿಕ್ ಮಹಾಸಾಗರದ ಉಷ್ಣತೆಯಲ್ಲಿನ ಏರಿಕೆಯು ವಾಯು ಭಾರದಲ್ಲಿ ವ್ಯತ್ಯಾಸವನ್ನು ಉಂಟುಮಾಡಿ, ಭಾರತದ ಮುಂಗಾರು ಮಳೆಯ ಮೇಲೆ ನೇರ ಪರಿಣಾಮ ಬೀರುತ್ತದೆ ಎಂಬುದು ವಿಜ್ಞಾನಿಗಳ ವಾದ. ಈ ವರ್ಷ ಎಲ್ ನಿನೋದ ಪ್ರಭಾವ ದಿಂದಾಗಿ ಮಳೆಯ ಕೊರತೆಯಾಗಬಹುದು ಮತ್ತು ದೇಶ ಬರಗಾಲದ ಸ್ಥಿತಿಯನ್ನು ಎದುರಿಸ ಬೇಕಾಗಬಹುದು ಎಂಬ ಚರ್ಚೆಗಳು ಮುನ್ನೆಲೆಗೆ ಬಂದಿವೆ. ಆದರೆ, ಪರಿಸ್ಥಿತಿಯನ್ನು **3ನೇ ಪುಟಕ್ಕೆ**

## ಡಾ.ವೀರೇಂದ್ರ ಹೆಗ್ಗಡೆ ಶ್ರೇಷ್ಠ ಮನುಷ್ಯ –ಪ್ರಕಾಶ್ ರಾಜ್

**ಬೆಂಗಳೂರು:** ತಾವು ತಮ್ಮ ಜೀವನದಲ್ಲಿ ಒಂದೇ ಒಂದು ಬಾರಿ ಧರ್ಮಸ್ಥಳದ ಧರ್ಮಾಧಿಕಾರಿ ಡಾ. ವೀರೇಂದ್ರ ಹೆಗ್ಗಡೆ ಅವರನ್ನು ಭೇಟಿ ಮಾಡಿದ್ದು, ಅವರು ಅತ್ಯಂತ ಅದ್ಭುತವಾದ ಮತ್ತು ಶ್ರೇಷ್ಠ ಮನುಷ್ಯ ಎಂದು ಪ್ರಕಾಶ್ ರಾಜ್ ಶ್ಲಾಘಿಸಿದರು. ಪರಮ ಪವಿತ್ರ ಧರ್ಮಸ್ಥಳದ ಮೇಲೆ ಯಾಕೆ ಅಪಪ್ರಚಾರ ಮಾಡಲಿ. ವಿಷಯವನ್ನು ತಿರುಚಿ ತಮಗೆ ಧರ್ಮಸ್ಥಳದ ಮೇಲೆ ಪ್ರೀತಿ ಇಲ್ಲ, ತಾವು ಧರ್ಮ ವಿರೋಧಿ ಅಂತೆಲ್ಲಾ ಬಣ್ಣ ಬಳಿಯಲಾಗುತ್ತಿದೆ. ತಮ್ಮ ಹೆಂಡತಿ ಪ್ರತಿದಿನ ದೇವರ ಪೂಜೆ ಮಾಡುತ್ತಾಳೆ, ತಾವು ಅವಳ ಭಾವನೆಗಳನ್ನು ಗೌರ ವಿಸುತ್ತೇನೆ. ಧರ್ಮಸ್ಥಳ ಕ್ಷೇತ್ರದ ವಿರುದ್ಧ ಷಡ್ಯಂತ್ರ ರೂಪಿಸಲಾಗಿದೆ ಎನ್ನಲಾದ ಪ್ರಕರಣದಲ್ಲಿ ತಮ್ಮ ಹೆಸರು ಕೇಳಿಬಂದಿರುವ ಹಿನ್ನೆಲೆಯಲ್ಲಿ ನಟ ಪ್ರಕಾಶ್ ರಾಜ್ ಅವರು ಬೆಂಗಳೂರಿನ ಪ್ರೆಸ್ ಕ್ಲಬ್‌ನಲ್ಲಿ ಸುದ್ದಿಗೋಷ್ಠಿ **3ನೇ ಪುಟಕ್ಕೆ**



## ಹರ್ಮೂಜ್ ಶಾಂತ: ಇಂಧನ ಅಭಾವದ ಆತಂಕ..?

**ನವದೆಹಲಿ:** ಜಾಗತಿಕ ಇಂಧನ ಪೂರೈಕೆಯ ಜೀವನಾಡಿಯಾಗಿರುವ ಹರ್ಮೂಜ್ ಜಲ ಸಂಧಿಯು ಕಳೆದ ಕೆಲವು ತಿಂಗಳುಗಳಿಂದ ಭೌಗೋಳಿಕ ರಾಜಕೀಯ ಸಂಘರ್ಷದ ಕೇಂದ್ರಬಿಂದುವಾಗಿತ್ತು. ಫೆಬ್ರವರಿ 2026 ರಲ್ಲಿ ಆರಂಭವಾದ ಉದ್ವಿಗ್ನತೆಯು ಜಾಗ ತಿಕ ತೈಲ ಮಾರುಕಟ್ಟೆಯಲ್ಲಿ ಭಾರಿ ಆತಂಕ ವನ್ನು ಸೃಷ್ಟಿಸಿತ್ತು. ಇದೀಗ ಅಮೆರಿಕ ಮತ್ತು ಇರಾನ್ ನಡುವಿನ ಶಾಂತಿ ಒಪ್ಪಂದದ ಮಾತುಕತೆಗಳು ಅಂತಿಮ ಹಂತ ತಲು ಪಿದ್ದು, ಜಲಸಂಧಿ ಮತ್ತೆ ಸಹಜ ಸ್ಥಿತಿಗೆ ಮರಳುವ ಲಕ್ಷಣಗಳು ಗೋಚರಿಸುತ್ತಿವೆ. ಈ ಬೆಳವಣಿಗೆಯು **3ನೇ ಪುಟಕ್ಕೆ**









## ಹರ್ಮೂಜ್ ಶಾಂತ: ಇಂಧನ ಅಭಾವದ ಆತಂಕ..?

ಒಂದನೇ ಪುಟದಿಂದ......

ಭಾರತದಂತಹ ಇಂಧನ ಆಮದುದಾರ ದೇಶಗಳಿಗೆ ದೊಡ್ಡ ನಿರಾಳತೆಯನ್ನು ತಂದಿದ್ದರೂ, "ಇನ್ನು ಇಂಧನ ಕೊರತೆ ಇರುವುದಿಲ್ಲವೇ?" ಎಂಬ ಪ್ರಶ್ನೆಗೆ ಆಳವಾದ ವಿಶ್ಲೇಷಣೆಯ ಅಗತ್ಯವಿದೆ. ಹರ್ಮೂಜ್ ಜಲಸಂಧಿಯ ಪುನಃ ತೆರೆಯುವಿಕೆಯು ತೈಲ ಮತ್ತು ಅನಿಲ ಟ್ಯಾಂಕರ್‌ಗಳ ಸುಗಮ ಸಂಚಾರಕ್ಕೆ ದಾರಿ ಮಾಡಿಕೊಡುತ್ತದೆ ಎಂಬುದು ಸತ್ಯ. ಆದರೆ, ಕಳೆದ ಮೂರು ತಿಂಗಳಿಂದ ಸ್ಥಗಿತಗೊಂಡಿದ್ದ ಸರಕು ಸಾಗಾಟ ವ್ಯವಸ್ಥೆಯನ್ನು ಸಂಪೂರ್ಣವಾಗಿ ಹಳೆಯ ವೇಗಕ್ಕೆ ತರುವುದುತಕ್ಷಣಕ್ಕೆ ಸಾಧ್ಯವಿಲ್ಲ. ಬಂದರುಗಳಲ್ಲಿನ ದಟ್ಟಣೆ ನಿರ್ವಹಣೆ, ಹಡಗುಗಳ ಲಭ್ಯತೆ ಮತ್ತು ವಿಮೆ ಪ್ರೀಮಿಯಂ ದರಗಳು ಸಾಮಾನ್ಯ ಸ್ಥಿತಿಗೆ ಬರಲು ಇನ್ನೂ ಕೆಲವು ವಾರಗಳ ಕಾಲಾವಕಾಶ ಬೇಕಾಗುತ್ತದೆ. ಮಂಗಳೂರಿನ ಎಂ.ಆರ್.ಪಿ.ಎಲ್‌ನಂತಹ ಪ್ರಮುಖ ಸಂಸ್ಕರಣಾಗಾರಗಳ ಮೇಲೆ ಇದರ ಧನಾತ್ಮಕ ಪರಿಣಾಮವಾಗಲಿದ್ದು, ಕಚ್ಚಾ ತೈಲ ಆಮದು ಸರಾಗಗೊಳ್ಳುವುದರಿಂದ ಸ್ಥಳೀಯವಾಗಿ ಇಂಧನ ಬೆಲೆ ಮತ್ತು ಪೂರೈಕೆ ಸ್ಥಿರತೆ ಕಾಯ್ದುಕೊಳ್ಳಲು ಸಹಕಾರಿಯಾಗಲಿದೆ. ಭಾರತವು ಈ ಸಂಘರ್ಷದ ಅವಧಿಯಲ್ಲಿ ಅತ್ಯಂತ ಸಂಯಮ ಮತ್ತು ಕಾರ್ಯತಂತ್ರದ ಚಾಕಚಕ್ಯತೆಯಿಂದ ವರ್ತಿಸಿದೆ. ಸರ್ಕಾರವು ತೈಲ ಪೂರೈಕೆಯಲ್ಲಿ ಯಾವುದೇ ಕೊರತೆಯಾಗದಂತೆ ನೋಡಿಕೊಳ್ಳಲು ರಷ್ಯಾ, ಅಮೆರಿಕ ಮತ್ತು ಆಸ್ಟ್ರೇಲಿಯಾದಂತಹ ಪರ್ಯಾಯ ಮೂಲಗಳಿಂದ ಆಮದನ್ನು ಹೆಚ್ಚಿಸಿತ್ತು. ಮಂಗಳೂರು, ವಿಶಾಖಪಟ್ಟಣಂ ಮತ್ತು ಪಾಡೂರಿನಲ್ಲಿರುವ ಕಾರ್ಯತಂತ್ರದ ಪೆಟ್ರೋಲಿಯಂ ಮೀಸಲು ನಿಧಿಗಳು ಕಠಿಣ ಸಮಯದಲ್ಲಿ ಆಸರೆಯಾದವು. ಪ್ರಸ್ತುತ ಪೆಟ್ರೋಲಿಯಂ ಸಚಿವಾಲಯದ ಮಾಹಿತಿಯಂತೆ, ದೇಶದಲ್ಲಿ ಪೆಟ್ರೋಲ್, ಡೀಸೆಲ್ ಮತ್ತು ಎಲ್‌ಪಿಜಿಯ ದಾಸ್ತಾನು ಸಮರ್ಪಕವಾಗಿದೆ. ಇತ್ತೀಚೆಗೆ ಡೀಸೆಲ್ ಮಾರಾಟದ ಮೇಲೆ ವಿಧಿಸಿದ್ದ ತಾತ್ಕಾಲಿಕ ಮಿತಿಗಳು ಮತ್ತು ಬಲ್ಕ್ ಗ್ರಾಹಕರಿಗೆ ನೀಡಲಾದ ಸೂಚನೆಗಳು ಇಂಧನ ಪೂರೈಕೆಯನ್ನು ಸರಿದೂಗಿಸುವಲ್ಲಿ ಯಶಸ್ವಿಯಾಗಿವೆ. ಹರ್ಮೂಜ್ ಜಲಸಂಧಿ ಸಹಜ ಸ್ಥಿತಿಗೆ ಮರಳಿರುವುದು ದೀರ್ಘಾವಧಿಯಲ್ಲಿ ಭಾರತಕ್ಕೆ ಧನಾತ್ಮಕ ಅಂಶವಾಗಿದೆ. ಇದು ಸರಕು ಸಾಗಾಟದ ವೆಚ್ಚವನ್ನು ತಗ್ಗಿಸಲು ಮತ್ತು ಆಮದು ಬಿಲ್ ಅನ್ನು ನಿಯಂತ್ರಣದಲ್ಲಿಡಲು ಸಹಕಾರಿಯಾಗಲಿದೆ. ಆದಾಗ್ಯೂ, ಇಂಧನ ಭದ್ರತೆಯ ವಿಷಯದಲ್ಲಿ ಭಾರತವು ಕೇವಲ ಒಂದು ಮಾರ್ಗದ ಮೇಲೆ ಅತಿಯಾಗಿ ಅವಲಂಬಿತವಾಗುವ ಅಪಾಯವನ್ನು ಅರಿತುಕೊಂಡಿದೆ. ಭವಿಷ್ಯದಲ್ಲಿ ಇಂಧನ ಮೂಲಗಳ ವೈವಿಧ್ಯೀಕರಣ, ಹಸಿರು ಶಕ್ತಿಯ ಅಳವಡಿಕೆ ಮತ್ತು ದೇಶೀಯ ಸಂಸ್ಕರಣಾ ಸಾಮರ್ಥ್ಯವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಭಾರತದ ಪ್ರಯತ್ನಗಳು ಮತ್ತಷ್ಟು ತೀವ್ರಗೊಳ್ಳಬೇಕಿದೆ.

## ಮಳೆ ಅನಿಶ್ಚಿತತೆ : ಬರಗಾಲದ ಭೀತಿಯೇ?

ಒಂದನೇ ಪುಟದಿಂದ......

ಆತಂಕದ ದೃಷ್ಟಿಯಿಂದ ನೋಡುವ ಬದಲು, ವಾಸ್ತವಿಕವಾಗಿ ವಿಶ್ಲೇಷಿಸುವುದು ಇಂದಿನ ಅಗತ್ಯವಾಗಿದೆ. ಎಲ್ ನಿನೋ ಬಂದಕೂಡಲೇ ಭಾರತದಲ್ಲಿ ಬರಗಾಲ ಬರುತ್ತದೆ ಎಂಬುದು ಸಂಪೂರ್ಣ ಸತ್ಯವಲ್ಲ. ಕಳೆದ ಕೆಲವು ದಶಕಗಳ ಅಂಕಿ ಅಂಶಗಳನ್ನು ಗಮನಿಸಿದಾಗ, ಎಲ್ ನಿನೋ ಪ್ರಭಾವವಿದ್ದ ವರ್ಷಗಳಲ್ಲೂ ಭಾರತದಲ್ಲಿ ಉತ್ತಮ ಮಳೆಯಾದ ನಿದರ್ಶನಗಳಿವೆ. ಇದಕ್ಕೆ ಪ್ರಮುಖ ಕಾರಣ ಹಿಂದೂ ಮಹಾಸಾಗರದ 'ಡೈಪೋಲ್' ವಿದ್ಯಮಾನ. ಪೆಸಿಫಿಕ್ ಸಾಗರದ ಉಷ್ಣತೆಯು ಮುಂಗಾರಿನ ಮೇಲೆ ನಕಾರಾತ್ಮಕ ಪ್ರಭಾವ ಬೀರಿದರೂ, ಹಿಂದೂ ಮಹಾಸಾಗರದ ಮೇಲ್ಮೈ ಉಷ್ಣತೆಯು ಅನುಕೂಲಕರವಾಗಿದ್ದರೆ, ಮಳೆಯ ಪ್ರಮಾಣವು ಸರಾಸರಿಯ ಮಟ್ಟವನ್ನು ಕಾಪಾಡಿಕೊಳ್ಳುತ್ತದೆ. ಆದ್ದರಿಂದ, ಕೇವಲ ಒಂದುಅಂಶವನ್ನು ಆಧರಿಸಿ ಬರಗಾಲವನ್ನು ನಿರ್ಧರಿಸುವುದು ವೈಜ್ಞಾನಿಕವಾಗಿ ಸರಿಯಲ್ಲ. ಆದಾಗ್ಯೂ, ಮಳೆಯ ಪ್ರಮಾಣದಲ್ಲಿ ವ್ಯತ್ಯಯಉಂಟಾದಲ್ಲಿಅದು ಜಲ ಮೂಲಗಳ ಮೇಲೆ ನೇರ ಪರಿಣಾಮ ಬೀರುತ್ತದೆ. ಕರಾವಳಿಯ ನದಿಗಳ ನೀರಿನ ಮಟ್ಟ ಕುಸಿಯುವುದು, ಅಂತರ್ಜಲ ಮಟ್ಟ ಕುಸಿಯುವುದು ಮತ್ತು ಕೃಷಿ ಚಟುವಟಿಕೆಗಳಿಗೆ ನೀರಿನ ಅಭಾವ ಉಂಟಾಗುವುದು ಮೊದಲಾದ ಸವಾಲುಗಳು ಎದುರಾಗಬಹುದು. ಈ ನಿಟ್ಟಿನಲ್ಲಿ ರೈತರು ಮತ್ತು ಸಾರ್ವಜನಿಕರು ಈಗಿನಿಂದಲೇ ಮಳೆ ನೀರಿನ ಕೊಯ್ಲು, ನೀರಿನ ಮಿತಬಳಕೆ ಮತ್ತು ಪರ್ಯಾಯ ಬೆಳೆ ಪದ್ಧತಿಗಳ ಕುರಿತು ಜಾಗೃತರಾಗಬೇಕಿದೆ. ಸರ್ಕಾರದ ಮಟ್ಟದಲ್ಲಿಯೂ ಈ ಸವಾಲನ್ನು ಎದುರಿಸಲು ಸಿದ್ಧತೆ ಅಗತ್ಯವಿದೆ. ಕೃಷಿ ಇಲಾಖೆಯು ರೈತರಿಗೆ ಕಡಿಮೆ ನೀರಿನಲ್ಲಿ ಬೆಳೆಯಬಹುದಾದ ಬೆಳೆಗಳ ಬಗ್ಗೆ ಮಾಹಿತಿ ನೀಡಬೇಕು ಮತ್ತು ಜಲಾಶಯಗಳಲ್ಲಿನ ನೀರಿನ ನಿರ್ವಹಣೆಯನ್ನು ವೈಜ್ಞಾನಿಕವಾಗಿ ಮಾಡಬೇಕು. ಬರಗಾಲದ ಆತಂಕದ ಬದಲು, ನೀರಿನ ಸುಸ್ಥಿರ ನಿರ್ವಹಣೆಯೇ ಈ ಹವಾಮಾನ ಸವಾಲಿಗೆ ಏಕೈಕ ಉತ್ತರವಾಗಿದೆ. ಪ್ರಕೃತಿಯ ಅನಿಶ್ಚಿತತೆಯು ನಮ್ಮ ನಿಯಂತ್ರಣದಲ್ಲಿ ಇಲ್ಲದಿದ್ದರೂ, ಅದನ್ನು ಎದುರಿಸಲು ನಾವು ಮಾಡಿಕೊಳ್ಳುವ ಸಿದ್ಧತೆಗಳು ನಮ್ಮಕೈಯಲ್ಲಿವೆ. ಒಟ್ಟಾರೆಯಾಗಿ ಹೇಳುವುದಾದರೆ, ಎಲ್ ನಿನೋ ಎಂಬುದು ಒಂದು ನೈಸರ್ಗಿಕ ಸವಾಲು ಅಷ್ಟೆ, ಅದು ವಿಪತ್ತಲ್ಲ. ಭಾರತೀಯ ಹವಾಮಾನ ಇಲಾಖೆಯು ನೀಡುವ ನಿಖರವಾದ ಮುನ್ಸೂಚನೆಗಳನ್ನು ಗಮನಿಸುತ್ತಾ, ಸಮರ್ಪಕ ನೀರು ನಿರ್ವಹಣೆ ಮತ್ತು ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಂಡರೆ ಬರಗಾಲದ ಭೀತಿಯನ್ನು ಸಮರ್ಥವಾಗಿ ಎದುರಿಸಬಹುದು.

## ಡಾ.ವೀರೇಂದ್ರ ಹೆಗ್ಗಡೆ ಶ್ರೇಷ್ಠ ಮನುಷ್ಯ – ಪ್ರಕಾಶ್ ರಾಜ್

ಒಂದನೇ ಪುಟದಿಂದ......

ನಡೆಸಿ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಸುದ್ದಿಗೋಷ್ಠಿಯ ಆರಂಭದಲ್ಲಿ ಮಾಧ್ಯಮಗಳ ಆಹ್ವಾನ ಪತ್ರಿಕೆಯ ವಿವಾದಕ್ಕೆ ಸ್ಪಷ್ಟನೆ ನೀಡಿದ ಅವರು, ತಾವು ಸಾಮಾಜಿಕ ಜಾಲತಾಣಗಳಲ್ಲಿ ಪ್ರೆಸ್ ಮೀಟ್ ಬಗ್ಗೆ ಪೋಸ್ಟ್ ಹಾಕಿದಾಗ 'ಮಾರಿಕೊಂಡ ಮಾಧ್ಯಮಗಳು' ಎಂಬ ಪದ ಬಳಸಿರುವುದು ನಿಜ ಎಂದು ಒಪ್ಪಿಕೊಂಡರು. ಆದರೆ, ಪ್ರೆಸ್‌ಕ್ಲಬ್‌ಗೆ ಅಧಿಕೃತವಾಗಿ ಕಳುಹಿಸಿದ ಇನ್ವಿಟೇಶನ್‌ನಲ್ಲಿ ಆ ಪದ ಬಳಸದೇ, ಮಾಧ್ಯಮದವರನ್ನು ತಮ್ಮ 'ಬಂಧುಗಳು ಮತ್ತು ಆತ್ಮೀಯರು' ಎಂದೇ ಕರೆದಿರುವುದಾಗಿ ತಿಳಿಸಿದರು. ಕೆಲವು ಗಂಭೀರ ಪ್ರಶ್ನೆಗಳಿಗೆ ಉತ್ತರಿಸುವ ಜವಾಬ್ದಾರಿ ತಮ್ಮ ಮೇಲಿದ್ದ ಕಾರಣ ಈ ಸುದ್ದಿಗೋಷ್ಠಿ ಕರೆದಿರುವುದಾಗಿ ಅವರು ಸ್ಪಷ್ಟಪಡಿಸಿದರು. ಚಿನ್ನಯ್ಯ ತಮ್ಮ ಹೆಸರು ಹೇಳಿದ್ದಾನೋ ಇಲ್ಲವೋ ತಮಗೆ ಗೊತ್ತಿಲ್ಲ ಎಂದಿದ್ದಾರೆ. ಆದರೆ ಗಿರೀಶ್ ಮಟ್ಟಣ್ಣನವರ್ ಹೇಳಿದಂತೆ ಕೇಳಿ ಚಿನ್ನಯ್ಯ ಮಾತನಾಡಿದ್ದಾನೆ. ಈ ಪ್ರಕರಣದಲ್ಲಿ 200 ಕೋಟಿ ರೂಪಾಯಿ ಹಗರಣ ಮತ್ತು ಪೇಮೆಂಟ್ ವ್ಯವಹಾರ ನಡೆದಿದೆ ಎಂದು ಚಿನ್ನಯ್ಯ ಹೇಳಿದ್ದಾನಂತೆ. ಕೆಲವು ಮಾಧ್ಯಮಗಳಂತೂ ಈ ಷಡ್ಯಂತ್ರದಲ್ಲಿ ತಮ್ಮ ಕೈವಾಡ ಇದೆ ಎಂದು ಅವರೇ ಸ್ವತಃ ಡಿಕ್ಲೇರ್ ಮಾಡಿಬಿಟ್ಟಿದ್ದಾರೆ. ಆದರೆ ತಾವು ಇದುವರೆಗೂ ಚಿನ್ನಯ್ಯ ಅಥವಾ ಮಟ್ಟಣ್ಣನವರ್ ಸೇರಿ ಯಾರನ್ನೂ ಖುದ್ದಾಗಿ ಭೇಟಿ ಮಾಡಿಲ್ಲ ಎಂದು ಸ್ಪಷ್ಟಪಡಿಸಿದರು. ಪ್ರಕರಣದ ಹಿನ್ನೆಲೆಯನ್ನು ವಿವರಿಸಿದ ಅವರು, ಹಿರಿಯ ಪೊಲೀಸ್ ಅಧಿಕಾರಿ ಮೊಹಾಂತಿ ಅವರು ಇನ್ಚಾರ್ಜ್ ತಗೊಳ್ಳದ ಸಮಯದಲ್ಲಿ ತಮಗೆ ಗಿರೀಶ್ ಮಟ್ಟಣ್ಣನವರ್ ಕಡೆಯಿಂದ ಒಂದು ಫೋನ್ ಕರೆ ಬಂದಿತ್ತು. 'ಮಾಸ್ಕ್ ಮ್ಯಾನ್' (ಚಿನ್ನಯ್ಯ) ನಿಮ್ಮ ಹತ್ತಿರ ಮಾತನಾಡಬೇಕಂತೆ ಎಂದಾಗ ತಾವು ಫೋನ್ ಪಡೆದುಕೊಂಡಿದ್ದಾಗಿ ಹೇಳಿದರು. ಆತ ತಮಿಳಿನಲ್ಲಿ ಮಾತನಾಡುತ್ತಾ, ತನಗೆ ಬಹಳ ವಿಷಯಗೊತ್ತು, ನಿಮ್ಮನ್ನು ಭೇಟಿ ಆಗಬೇಕು ಎಂದಾಗ ವಾಯ್ಸ್ ರೆಕಾರ್ಡ್ ಮಾಡಿ ಕಳುಹಿಸು ಎಂದು ಸೂಚಿಸಿದ್ದಾಗಿ ತಿಳಿಸಿದರು

## ಕೊರಗ ಸಮುದಾಯಕ್ಕೆ ವಸತಿ ಸೌಲಭ್ಯ: ಅರ್ಜಿ ಆಹ್ವಾನ

ಮಂಗಳೂರು : ದಕ್ಷಿಣ ಕನ್ನಡ ಜಿಲ್ಲೆಯ ವಸತಿ ರಹಿತ ಕೊರಗ ಸಮುದಾಯದವರಿಗೆ ರೂ. 4.50 ಲಕ್ಷಗಳಂತೆ ವಸತಿ ಸೌಲಭ್ಯಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ನಮೂನೆಯನ್ನು ಗ್ರಾಮ ಪಂಚಾಯತ್/ ನಗರಸಭೆ/ ಪುರಸಭೆಗಳಿಂದ ಪಡೆದು ಆಯಾ ತಾಲೂಕಿನ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರ ಕಚೇರಿಗೆ ಸಲ್ಲಿಸಬೇಕು ಎಂದು ಬುಡಕಟ್ಟು ಅಭಿವೃದ್ಧಿ ಯೋಜನೆ ಯೋಜನಾ ಸಮನ್ವಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಲ್ಪಸಂಖ್ಯಾತರ ವಿದ್ಯಾರ್ಥಿವೇತನಕ್ಕೆ ಅರ್ಜಿ ಆಹ್ವಾನ

ಮಂಗಳೂರು : ಕರ್ನಾಟಕ ರಾಜ್ಯದ ಅರ್ಹ ಅಲ್ಪಸಂಖ್ಯಾತರ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ಖ್ ಮತ್ತು ಪಾರ್ಸಿ ವಿದ್ಯಾರ್ಥಿಗಳಿಂದ 2026-27ನೇ ಸಾಲಿಗೆ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದಲ್ಲಿ 1 ನೇ ತರಗತಿಯಿಂದ 8ನೇ ತರಗತಿಯ ವಿದ್ಯಾರ್ಥಿಗಳಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನಕ್ಕೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ 0824-2433078, 82777 99990 ಗೆ ಸಂಪರ್ಕಿಸಬಹುದು.

## ಗ್ರಾಮ ಪಂಚಾಯತಿ ಮೇಲ್ವಿಚಾರಕರ ಹುದ್ದೆಗಳಿಗೆ ಅರ್ಜಿ ಆಹ್ವಾನ

ಶಿವಮೊಗ್ಗ : ಶಿವಮೊಗ್ಗ ಜಿಲ್ಲಾ ವ್ಯಾಪ್ತಿಯಲ್ಲಿ ಪ್ರಸ್ತುತ ಖಾಲಿ ಇರುವ 14 ಗ್ರಾಮ ಪಂಚಾಯತಿ ಅರಿವು ಕೇಂದ್ರಗಳಿಗೆ ತಲಾ ಒಂದರಂತೆ ಒಟ್ಟು 14 ಮೇಲ್ವಿಚಾರಕರ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಮಹಿಳಾ ಪಾಲಿಟೆಕ್ನಿಕ್ : ಡಿಪ್ಲೊಮಾ ಪ್ರವೇಶಕ್ಕೆ ಅರ್ಜಿ ಆಹ್ವಾನ

ಶಿವಮೊಗ್ಗ : ಸರ್ಕಾರಿ ಮಹಿಳಾ ವಸತಿ ಪಾಲಿಟೆಕ್ನಿಕ್ ಶಿವಮೊಗ್ಗ ಸಂಸ್ಥೆಯಲ್ಲಿ ಡಿಪ್ಲೋಮಾ ಕೋರ್ಸ್‌ಗಳಿಗೆ ಪ್ರವೇಶ ಪರೀಕ್ಷೆಯ ಮೆರಿಟ್ ಹಾಗೂ ರೋಸ್ಟರ್‌ಗನುಗುಣವಾಗಿ ಪ್ರವೇಶಾತಿ ಪ್ರಕ್ರಿಯೆ ಆರಂಭವಾಗಿದ್ದು, ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ದೂ.ಸಂ 9886610245 ನ್ನು ಸಂಪರ್ಕಿಸಬಹುದು.

## ಅರಿವು ಯೋಜನೆಯಡಿ ಅರ್ಜಿ ಆಹ್ವಾನ

ಮಡಿಕೇರಿ : ಕರ್ನಾಟಕ ಕ್ರಿಶ್ಚಿಯನ್ ಸಮುದಾಯ ಅಭಿವೃದ್ಧಿ ನಿಗಮ ವತಿಯಿಂದ 2026-27ನೇ ಸಾಲಿನ ಕ್ರಿಶ್ಚಿಯನ್ ಜನಾಂಗದವರಿಗೆ ಅರಿವು ಯೋಜನೆಯಡಿ ವಿದ್ಯಾಭ್ಯಾಸ ಸಾಲ ಪಡೆಯಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ದೂ.ಸಂ.08272-201449ನ್ನು ಸಂಪರ್ಕಿಸಬಹುದು.

## ಕದ್ರಿ ವಾಲ್ಮೀಕಿ ಆಶ್ರಮ ಶಾಲೆಯಲ್ಲಿ ಯೋಗ ಶಿಬಿರ



ಮಂಗಳೂರು : ಅಂತರರಾಷ್ಟ್ರೀಯ ಯೋಗ ದಿನಾಚರಣೆಯ ಪೂರ್ವಭಾವಿಯಾಗಿ, ಮಂಗಳೂರಿನ ಕದ್ರಿ ಪದವಿನಲ್ಲಿರುವ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ವಾಲ್ಮೀಕಿ ಆಶ್ರಮ ಶಾಲೆಯಲ್ಲಿ ವಿಶೇಷ ಯೋಗ ಶಿಬಿರವನ್ನು ಆಯೋಜಿಸಲಾಗಿತ್ತು. ಪತಂಜಲಿ ಯೋಗ ಸಮಿತಿ ಭಾರತ್ ಸ್ವಾಭಿಮಾನ್ ಟ್ರಸ್ಟ್‌ನ ಜಿಲ್ಲಾಧ್ಯಕ್ಷರಾದ ಯೋಗ ಗುರು ಡಾ. ಎಂ. ಜಗದೀಶ್ ಶೆಟ್ಟಿ ಬಿಜೈ ಅವರ ನೇತೃತ್ವದಲ್ಲಿ ನಡೆದ ಇದು 250ನೇ ಉಚಿತ ಯೋಗ ಶಿಬಿರವಾಗಿದೆ. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಯುಷ್ ಇಲಾಖೆ ಹಾಗೂ ಜಿಲ್ಲಾ ವೆನ್ಲಾಕ್ ಆಸ್ಪತ್ರೆಯ ಸಂಯುಕ್ತ ಆಶ್ರಯದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ 200ಕ್ಕೂ ಹೆಚ್ಚು ಮಕ್ಕಳು ಪಾಲ್ಗೊಂಡು ಯೋಗದ ಪ್ರಯೋಜನಗಳನ್ನು ಪಡೆದುಕೊಂಡರು.

## ಪ್ಲಾಸ್ಟಿಕ್ ಪಾರ್ಕ್‌ಗೆ ಸಂಸದ ಕ್ಯಾ. ಚೌಟ ಭೇಟಿ



ದಕ್ಷಿಣ ಕನ್ನಡ : ಜಿಲ್ಲೆಯ ಆರ್ಥಿಕ ಹಾಗೂ ಕೈಗಾರಿಕಾ ರಂಗಕ್ಕೆ ಹೊಸ ಶಕ್ತಿ ತುಂಬಲಿರುವ ಗಂಜಿಮಠದ ಮಹತ್ವಾಕಾಂಕ್ಷೆಯ ಪ್ಲಾಸ್ಟಿಕ್ ಪಾರ್ಕ್ ಯೋಜನಾ ಪ್ರದೇಶಕ್ಕೆ ದಕ್ಷಿಣ ಕನ್ನಡ ಲೋಕಸಭಾ ಕ್ಷೇತ್ರದ ಸಂಸದ ಕ್ಯಾ. ಬ್ರಿಜೇಶ್‌ಚೌಟ ಮಂಗಳೂರು ನಗರ ಉತ್ತರ ವಿಧಾನಸಭಾ ಕ್ಷೇತ್ರದ ಶಾಸಕ ಡಾ. ವೈ. ಭರತ್ ಶೆಟ್ಟಿ ಅವರೊಂದಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಭೇಟಿಯ ವೇಳೆ ಪಾರ್ಕ್‌ನ ರಸ್ತೆ, ವಿದ್ಯುತ್, ನೀರು ಸರಬರಾಜು ಸೇರಿದಂತೆ ಪ್ರಮುಖ ಕಾಮಗಾರಿಗಳನ್ನು ಕೂಲಂ ಕೂಷವಾಗಿ ಪರಿಶೀಲಿಸಿದ ಸಂಸದರು, ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿದರು.

## ದಕ್ಷಿಣಕನ್ನಡ ಜೆಡಿಎಸ್ ಮಹಿಳಾ ಘಟಕದ ಸಭೆ ಯಶಸ್ವಿ



ಮಂಗಳೂರು: ಜನತಾದಳ ಜಾತ್ಯಾತೀತ (ಜೆಡಿಎಸ್) ದಕ್ಷಿಣ ಕನ್ನಡ ಜಿಲ್ಲಾ ಮಹಿಳಾ ಘಟಕದ ಮಹತ್ವದ ಸಭೆಯು ನಗರದ ವುಡ್‌ಲ್ಯಾಂಡ್ಸ್ ಹೋಟೆಲ್‌ನಲ್ಲಿ ಜಿಲ್ಲಾಧ್ಯಕ್ಷೆ ಶ್ರೀಮತಿ ರಮೀಝಾ ನಾಸೀರ್ ಅವರ ಅಧ್ಯಕ್ಷತೆಯಲ್ಲಿ ಅತ್ಯಂತ ಯಶಸ್ವಿಯಾಗಿ ನಡೆಯಿತು. ಸಭೆಯನ್ನುದ್ದೇಶಿಸಿ ಮಾತನಾಡಿದ ಜಿಲ್ಲಾಧ್ಯಕ್ಷ ಜಾಕೆ ಮಾಧವ ಗೌಡ ಅವರು, ಪಕ್ಷದ ಸಂಘಟನೆ ಬಲವರ್ಧನೆಯಲ್ಲಿ ಮಹಿಳಾ ಕಾರ್ಯಕರ್ತೆಯರ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ಗ್ರಾಮ ಪಂಚಾಯಿತಿ ಮಟ್ಟದಿಂದ ಜಿಲ್ಲಾ ಮಟ್ಟದವರೆಗೆ ಮಹಿಳೆಯರು ಹೆಚ್ಚಿನ ಜವಾಬ್ದಾರಿಯನ್ನು ವಹಿಸಿಕೊಂಡು ಪಕ್ಷದ ತತ್ವ-ಸಿದ್ಧಾಂತಗಳನ್ನು ಜನರಿಗೆ ತಲುಪಿಸಬೇಕೆಂದು ಕರೆ ನೀಡಿದರು.

## ಯುವ ಸಮೂಹವೇ ರಾಷ್ಟ್ರದ ಭವಿಷ್ಯ: ವಿವೇಕ್ ಆಳ್ವ



ಮೂಡುಬಿದಿರೆ: ಜವಾಬ್ದಾರಿಯನ್ನು ಸ್ವೀಕರಿಸಿದಾಗ ಮಾತ್ರ ಬದುಕಿನಲ್ಲಿ ಉತ್ತಮ ಸ್ಥಾನಮಾನ ಮತ್ತು ಯಶಸ್ಸು ಗಳಿಸಲು ಸಾಧ್ಯವಾಗುತ್ತದೆ. ಶಿಕ್ಷಣದ ಜೊತೆಗೆ ಉತ್ತಮ ವ್ಯಕ್ತಿತ್ವ ಹಾಗೂ ಸನ್ಮನಸ್ಸನ್ನು ರೂಪಿಸಿಕೊಳ್ಳುವುದು ಪ್ರತಿಯೊಬ್ಬ ವಿದ್ಯಾರ್ಥಿಯ ಪ್ರಮುಖ ಗುರಿಯಾಗಬೇಕು ಎಂದು ಆಳ್ವಾಸ್ ಶಿಕ್ಷಣ ಪ್ರತಿಷ್ಠಾನದ ಟ್ರಸ್ಟಿ ವಿವೇಕ್ ಆಳ್ವ ಅಭಿಪ್ರಾಯಪಟ್ಟಿದ್ದಾರೆ. ವಿದ್ಯಾರ್ಥಿಗಳಿಗಾಗಿ ಆಯೋಜಿಸಲಾಗಿದ್ದ 'ಅಂಕುರ' ಇಂಡಕ್ಷನ್ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಯುವಜನತೆ ಶ್ರೇಷ್ಠತೆ, ಉತ್ತಮ ಪರಿಸರ ನಿರ್ಮಾಣ ಮತ್ತು ಸಾಮಾಜಿಕ ಅರಿವಿನತ್ತ ಸಾಗಿದಾಗ ಮಾತ್ರ ಅರ್ಥಪೂರ್ಣ ಸಮಾಜ ನಿರ್ಮಾಣ ಸಾಧ್ಯ ಎಂದು ಅವರು ನುಡಿದರು.

## ಮಹಾನಗರ ಪಾಲಿಕೆಯಲ್ಲಿ ವಿಶೇಷ ಪರಿಷ್ಕರಣೆ ಸಹಾಯವಾಣಿ ಕೇಂದ್ರ ಪ್ರಾರಂಭ



ಮಂಗಳೂರು: ವಿಧಾನ ಪರಿಷತ್ ಶಾಸಕರಾದ ಶ್ರೀ ಐವನ್ ಡಿ'ಸೋಜಾರವರ ಮಂಗಳೂರು ಮಹಾನಗರ ಪಾಲಿಕೆಯ ತಮ್ಮ ಶಾಸಕರ ಕಛೇರಿಯಲ್ಲಿ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ ಸಹಾಯವಾಣಿ ಕೇಂದ್ರವನ್ನು (SIR) ಪ್ರಾರಂಭಿಸಲಾಯಿತು. ಮತದಾರರು ತಮ್ಮ ಹೆಸರನ್ನು ಮತದಾರರ ಪಟ್ಟಿಯಲ್ಲಿ ತಪ್ಪಿಸಿಕೊಳ್ಳದಂತೆ ತಡೆಯಲು ಮತ್ತು ಸರಿಯಾದ ದಾಖಲೆಗಳನ್ನು ಸರಿಯಾದ ಸಮಯದಲ್ಲಿ ನೀಡಿ ಖಾತ್ರಿ ಪಡಿಸಿಕೊಳ್ಳಲು ಈ ಸಹಾಯವಾಣಿ ಕೇಂದ್ರವು ಸಹಕಾರಿಯಾಗಲಿದೆ. ಸಾರ್ವಜನಿಕರು ಮೊಬೈಲ್ ಸಂಖ್ಯೆ: 8217865120 ಅನ್ನು ಸಂಪರ್ಕಿಸಿದಲ್ಲಿ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ನೊಂದಾಯಿಸಲು ಸಹಾಯ ಮಾಡಲಾಗುವುದು.

## ಮಾಣಿಲ ಶ್ರೀಧಾಮದಲ್ಲಿ 48 ದಿನಗಳ ವರಮಹಾಲಕ್ಷ್ಮೀ ವ್ರತಾಚರಣೆ



ಮಾಣಿಲ: ಆರಾಧನೆ ಮತ್ತು ಆಧ್ಯಾತ್ಮಿಕ ಚಿಂತನೆಗಳಿಂದ ಮಾತ್ರ ಮನುಷ್ಯನ ಆತ್ಮೋನ್ನತಿ ಸಾಧ್ಯ. ಭಜನೆ ಹಾಗೂ ಧ್ಯಾನದಂತಹ ಕ್ರಿಯೆಗಳಿಂದ ಮನಸ್ಸು ಪ್ರಫುಲ್ಲಗೊಂಡು, ಜೀವನದಲ್ಲಿ ನೆಮ್ಮದಿ ಪ್ರಾಪ್ತವಾಗುತ್ತದೆ ಎಂದು ಮಾಣಿಲ ಶ್ರೀಧಾಮ ದುರ್ಗಾ ಮಹಾಲಕ್ಷ್ಮೀ ಕ್ಷೇತ್ರದ ಶ್ರೀ ಮೋಹನದಾಸ ಪರಮಹಂಸ ಸ್ವಾಮೀಜಿ ಅಭಿಪ್ರಾಯ ಪಟ್ಟರು. ಮಾಣಿಲ ಶ್ರೀಧಾಮದಲ್ಲಿ ನಡೆಯಲಿರುವ 27ನೇ ವರ್ಷದ 48 ದಿನಗಳ ವರಮಹಾಲಕ್ಷ್ಮೀ ವ್ರತಾಚರಣೆಯ ಅಂಗವಾಗಿ ನಡೆದ ಪೂರ್ವಭಾವಿ ಸಭೆಯಲ್ಲಿ ಅವರು ಭಕ್ತರನ್ನು ಉದ್ದೇಶಿಸಿ ಅನುಗ್ರಹ ಸಂದೇಶ ನೀಡಿದರು. ಭಕ್ತರ ಹೃದಯದಲ್ಲಿ ನೆಲೆನಿಂತ ಮಹಾಲಕ್ಷ್ಮೀಯ ಪೂಜೆಯು ಮನುಷ್ಯನ ದೈನಂದಿನ ಒತ್ತಡಗಳನ್ನು ನಿವಾರಿಸಿ ಮನಸ್ಸಿಗೆ ಶಾಂತಿ ನೀಡುತ್ತದೆ ಎಂದು ಶ್ರೀಗಳು ವಿವರಿಸಿದರು.

## ಉತ್ತಮ ಆಹಾರ ಪದ್ಧತಿಯಿಂದ ರೋಗ ನಿಯಂತ್ರಣ ಸಾಧ್ಯ: ಯು.ಟಿ.ಖಾದರ್



ಕೊಣಾಜೆ: ಆರೋಗ್ಯವು ನಮ್ಮ ಕೈಯಲ್ಲೇ ಇದ್ದು, ಉತ್ತಮ ಆಹಾರ ಪದ್ಧತಿ ಮತ್ತು ಜೀವನಶೈಲಿಯ ಮೂಲಕ ಅನೇಕ ರೋಗಗಳನ್ನು ನಿಯಂತ್ರಿಸಲು ಸಾಧ್ಯ ಎಂದು ಆರೋಗ್ಯ ಸಚಿವ ಯು.ಟಿ.ಖಾದರ್ ತಿಳಿಸಿದ್ದಾರೆ. ಮುಡಿಪುವಿನಲ್ಲಿ ತಾಲೂಕು ಮಟ್ಟದ ಆಸ್ಪತ್ರೆ ನಿರ್ಮಿಸಲಾಗುವುದು ಎಂದು ಅವರು ಇದೇ ಸಂದರ್ಭದಲ್ಲಿ ಭರವಸೆ ನೀಡಿದರು. ಪಾವೂರು ಸರ್ಕಾರಿ ಪ್ರೌಢಶಾಲೆಯಲ್ಲಿ ನಡೆದ ಯೆನೆಪೋಯ ಆರೋಗ್ಯ ಕಾರ್ಡ್ ಹಾಗೂ ಆರೋಗ್ಯ ಪುಸ್ತಕ ವಿತರಣಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡುತ್ತಿದ್ದರು. ಯೆನೆಪೋಯ ಆಸ್ಪತ್ರೆಯು ಆರೋಗ್ಯ ಕಾರ್ಡ್ ಮೂಲಕ ಶೇಕಡಾ 90 ರಷ್ಟು ಉಚಿತ ಸೇವೆ ಒದಗಿಸುತ್ತಿರುವ ಅಪರೂಪದ ಸಂಸ್ಥೆಯಾಗಿದೆ ಎಂದು ಅವರು ಶ್ಲಾಘಿಸಿದರು.

## ಸಿರಿ ಸಂಸ್ಥೆಯಿಂದ ಎ.ವಿ.ಶೆಟ್ಟಿ ದಂಪತಿಗಳಿಗೆ ಸನ್ಮಾನ



ಉಜಿರೆ: ಬೆಳ್ತಂಗಡಿಯ ರೆಂಕೆದಗುತ್ತುವಿನಲ್ಲಿ ಕಾರ್ಯಾಚರಿಸುತ್ತಿರುವ ಶ್ರೀ ಧರ್ಮಸ್ಥಳ ಸಿರಿ ಗ್ರಾಮೋದ್ಯೋಗ ಸಂಸ್ಥೆಯ ಮಾತೃಶ್ರೀ ಇಂಡಸ್ಟ್ರಿಯಲ್ ಪಾರ್ಕ್‌ನಲ್ಲಿ ಪ್ರತಿ ತಿಂಗಳು ಆಚರಿಸುವ ಸಿರಿ ಸಿಬ್ಬಂದಿಗಳ ಹುಟ್ಟುಹಬ್ಬ ಕಾರ್ಯಕ್ರಮವು ಅತ್ಯಂತ ವಿಜೃಂಭಣೆಯಿಂದ ಜರುಗಿತು. ಕಾರ್ಯಕ್ರಮದಲ್ಲಿ ಧರ್ಮಸ್ಥಳ ಧರ್ಮಾಧಿಕಾರಿ ಡಾ. ಡಿ. ವೀರೇಂದ್ರ ಹೆಗ್ಗಡೆಯವರ ಆಪ್ತ ಕಾರ್ಯದರ್ಶಿ ಎ.ವಿ. ಶೆಟ್ಟಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದರು. ಸಂಸ್ಥೆಯ ಸಮಗ್ರ ಏಳಿಗೆಗಾಗಿ ಸತತವಾಗಿ ಶ್ರಮಿಸುತ್ತಾ ಸಂಪೂರ್ಣ ಸಹಕಾರ ನೀಡುತ್ತಿರುವ ಎ.ವಿ. ಶೆಟ್ಟಿ ದಂಪತಿಗಳಿಗೆ ಈ ಸಂದರ್ಭದಲ್ಲಿ ಎಲ್ಲ ಸಿರಿ ಸಿಬ್ಬಂದಿಗಳ ಪರವಾಗಿ ಆತ್ಮೀಯವಾಗಿ ಗೌರವಾರ್ಪಣೆ ಸಲ್ಲಿಸಲಾಯಿತು.

## ಪ್ರತಿಭಟನೆ ಸಂಧರ್ಭ ವಿದ್ಯಾರ್ಥಿಗಳ ಬಂಧನಕ್ಕೆ ತೀವ್ರ ಆಕ್ರೋಶ



ಮಂಗಳೂರು: ಮಂಗಳೂರು ವಿಶ್ವವಿದ್ಯಾಲಯದಲ್ಲಿ ತಲೆದೂರಿರುವ ಮೂಲಭೂತ ಸೌಕರ್ಯಗಳ ಕೊರತೆಯನ್ನು ನೀಗಿಸುವಂತೆ ಆಗ್ರಹಿಸಿ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ (ಎಬಿವಿಪಿ) ವತಿಯಿಂದ ವಿಶ್ವವಿದ್ಯಾಲಯದ ಆಡಳಿತ ಸೌಧದ ಎದುರು ಜೂನ್ 12ರಂದು ಬೃಹತ್ ಮತ್ತು ಶಾಂತಿಯುತ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿತ್ತು. ಪ್ರತಿಭಟನೆ ತೀವ್ರಗೊಳ್ಳುತ್ತಿದ್ದಂತೆ, ಉಪಕುಲಪತಿಗಳ ಆದೇಶದ ಮೇರೆಗೆ ಪೊಲೀಸ್ ಇಲಾಖೆಯು ಆಡಳಿತ ಸೌಧದಲ್ಲಿದ್ದ ವಿದ್ಯಾರ್ಥಿಗಳನ್ನು ಬಂಧಿಸಿದ್ದು, ಈ ಕ್ರಮಕ್ಕೆ ವಿದ್ಯಾರ್ಥಿ ಪರಿಷತ್ ತೀವ್ರ ಆಕ್ರೋಶ ವ್ಯಕ್ತಪಡಿಸಿದೆ. ವಿದ್ಯಾರ್ಥಿ ಹಿತಾಸಕ್ತಿಗಾಗಿ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ಎಬಿವಿಪಿ ಎಚ್ಚರಿಕೆ ನೀಡಿದೆ.

## ರೈತರ ಪರ ದನಿ ಎತ್ತಿದ ಕಿಶೋರ್ ಕುಮಾರ್ ಪುತ್ತೂರು



ಮಂಗಳೂರು: ಕೋವಿ (ಬಂದೂಕು) ಪರವಾನಗಿ ನವೀಕರಣಕ್ಕೆ ಅಗತ್ಯವಿರುವ ನಿರಾಪೇಕ್ಷಣಾ ಪತ್ರ (ಎನ್.ಒ.ಸಿ.) ಪಡೆಯಲು ದಕ್ಷಿಣ ಕನ್ನಡ ಜಿಲ್ಲೆಯ ರೈತರು ಎದುರಿಸುತ್ತಿರುವ ತೀವ್ರ ತೊಂದರೆಗಳನ್ನು ಗಂಭೀರವಾಗಿ ಪರಿಗಣಿಸಿರುವ ಉಡುಪಿ-ದಕ್ಷಿಣ ಕನ್ನಡ ಸ್ಥಳೀಯ ಸಂಸ್ಥೆಗಳ ಕ್ಷೇತ್ರದ ವಿಧಾನ ಪರಿಷತ್ ಸದಸ್ಯರಾದ ಶ್ರೀ ಕಿಶೋರ್ ಕುಮಾರ್ ಪುತ್ತೂರು ಅವರ ನೇತೃತ್ವದಲ್ಲಿ, ದಕ್ಷಿಣ ಕನ್ನಡ ಜಿಲ್ಲಾ ಬಿಜೆಪಿ ನಿಯೋಗವು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳನ್ನು ಭೇಟಿ ಮಾಡಿ ಮನವಿ ಸಲ್ಲಿಸಿದೆ. ರೈತರ ಸಮಸ್ಯೆಯನ್ನು ತಾಳ್ಮೆಯಿಂದ ಆಲಿಸಿದ ಎಸ್.ಪಿ. ಕೂಡಲೇ ಈ ಪ್ರಕ್ರಿಯೆಯನ್ನು ಸರಳೀಕರಿಸಿ, ಶೀಘ್ರದಲ್ಲಿಯೇ ರೈತರಿಗೆ ಎನ್.ಒ.ಸಿ. ಒದಗಿಸುವ ಭರವಸೆಯನ್ನು ನೀಡಿ ದ್ದಾರೆ.

## ಮಹಿಳೆಯರಿಗೆ ರಾಜ್ಯ ಸರ್ಕಾರದಿಂದ ದ್ರೋಹ – ಡಾ. ಭರತ್ ಶೆಟ್ಟಿ



ಮಂಗಳೂರು: "ಬಿಪಿಎಲ್ ಅಥವಾ ಎಪಿಎಲ್ ಯಾವುದೇ ಕಾರ್ಡ್ ಹೊಂದಿದ್ದರೂ ನಿಮ್ಮ ಖಾತೆಗೆ ಟಕ ಟಕ ಹಣ ಹಾಕುತ್ತೇವೆ" ಎಂದು ಚುನಾವಣೆಗೂ ಮುನ್ನ ಭರವಸೆ ನೀಡಿದ್ದ ಕಾಂಗ್ರೆಸ್ ಸರ್ಕಾರ, ಇದೀಗ ಲಕ್ಷಾಂತರ ಮಹಿಳೆಯರಿಗೆ ಗೃಹಲಕ್ಷ್ಮೀ ಹಣವನ್ನು ಸ್ಥಗಿತಗೊಳಿಸುವ ಮೂಲಕ ದೊಡ್ಡ ಮಟ್ಟದ 'ಸರ್ಜಿಕಲ್ ಸ್ಟ್ರೈಕ್' ನಡೆಸಿದೆ ಎಂದು ಮಂಗಳೂರು ಉತ್ತರ ಕ್ಷೇತ್ರದ ಶಾಸಕ ಡಾ. ಭರತ್ ಶೆಟ್ಟಿ ಆಕ್ರೋಶ ವ್ಯಕ್ತಪಡಿಸಿದ್ದಾರೆ. ರಾಜ್ಯದ 1.26 ಕೋಟಿ ಮಹಿಳೆಯರಿಗೆ ಪ್ರತಿ ತಿಂಗಳು ರೂ.2,000 ನೀಡುವುದಾಗಿ ಭರವಸೆ ನೀಡಿದ್ದ ಕಾಂಗ್ರೆಸ್ ಸರ್ಕಾರ, ಈಗ ಫೆಬ್ರವರಿ, ಮಾರ್ಚ್ ತಿಂಗಳ ಎರಡು ಕಂತುಗಳ ಸುಮಾರು ರೂ.5,000 ಕೋಟಿ ಹಣವನ್ನು ಪಾವತಿಸದೆ ಫಲಾನುಭವಿಗಳಿಗೆ ಅನ್ಯಾಯ ಮಾಡಿದೆ ಎಂದು ಆರೋಪಿಸಿದ್ದಾರೆ

## ರವಿವಾರದ ರಜೆ ಕುಕ್ಕೆ ಸುಬ್ರಹ್ಮಣ್ಯದಲ್ಲಿ ಭಕ್ತರ ದಂಡು



ಸುಬ್ರಹ್ಮಣ್ಯ: ದಕ್ಷಿಣ ಭಾರತದ ಪ್ರಸಿದ್ಧ ನಾಗಾರಾಧನೆಯ ಪುಣ್ಯಕ್ಷೇತ್ರ ಕುಕ್ಕೆ ಶ್ರೀ ಸುಬ್ರಹ್ಮಣ್ಯದಲ್ಲಿ ಭಕ್ತರ ಮಹಾಪೂರವೇ ಹರಿದುಬಂದಿದೆ. ಜೂನ್ ತಿಂಗಳು ಮಳೆಗಾಲದ ಆರಂಭದ ಸಮಯವಾಗಿದ್ದರೂ, ಈ ವರ್ಷ ಮಳೆಯ ಪ್ರಮಾಣ ತೀರಾ ಕಡಿಮೆ ಇರುವುದು ಹಾಗೂ ರವಿವಾರದ ರಜೆಯ ಜೊತೆಗೆ ಮಿಥುನ ಮಾಸದ ಆರಂಭವಾಗಿರುವುದರಿಂದ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಕ್ಷೇತ್ರಕ್ಕೆ ಆಗಮಿಸಿದ್ದಾರೆ. ರಾಜ್ಯ ಹಾಗೂ ಹೊರರಾಜ್ಯದ ವಿವಿಧ ಭಾಗಗಳಿಂದ ಭಕ್ತಾದಿಗಳು ಸುಬ್ರಹ್ಮಣ್ಯಕ್ಕೆ ದೌಡಾಯಿಸಿದ್ದಾರೆ. ಪಾರ್ಕಿಂಗ್ ಪ್ರದೇಶಗಳು ಭರ್ತಿಯಾಗಿದ್ದವು.




## ಸುನಿ..ಶಿಷ್ಯನಿಗಾಗಿ ಮೋಡ ಕವಿದ ವಾತಾವರಣ



ಒಂದು ಸರಳ ಪ್ರೇಮಕಥೆ ಸಿನಿಮಾ ಬಳಿಕ ನಿರ್ದೇಶಕ ಸಿಂಪಲ್ ಸುನಿ ಭತ್ತಳಿಕೆಯಿಂದ ಬರುತ್ತಿರುವ ಮತ್ತೊಂದು ಸೊಗಸಾದ ಪ್ರೇಮ ಕಥೆ ಮೋಡ ಕವಿದ ವಾತಾವರಣ. ಟೈಟಲ್‌ನಿಂದ ಗಮನ ಸೆಳೆಯುತ್ತಿರುವ ಈ ಸಿನಿಮಾ ಇದೇ ತಿಂಗಳ 26ಕ್ಕೆ ಬಿಡುಗಡೆಯಾಗುತ್ತಿದೆ. ಇತ್ತೀಚೆಗೆ ಮೋಡ ಕವಿದ ವಾತಾವರಣ ಸಿನಿಮಾದ ಟೀಸರ್ ಬಿಡುಗಡೆ ಕಾರ್ಯಕ್ರಮ ನಡೆಯಿತು. ಈ ವೇಳೆ ನಿರ್ದೇಶಕ ಸಿಂಪಲ್ ಸುನಿ ಮಾತನಾಡಿ, ಮೋಡ ಕವಿದ ವಾತಾವರಣ ನನ್ನ ಜೀವನದ ಸ್ಪೆಷಲ್ ಸಿನಿಮಾ. ನಾನು ಟ್ರೇಲರ್ ಚೆನ್ನಾಗಿ ಕಟ್ ಮಾಡುತ್ತೇನೆ ಎಂದು ಎಲ್ಲರೂ ಹೇಳುತ್ತಾರೆ. ಆದ್ರೆ ಈ ಚಿತ್ರದ ಚಾಲೆಂಜ್ ಏನೂ ಎಂದರೆ ಟ್ರೇಲರ್ ಕಟ್ ಚೆನ್ನಾಗಿ ಮಾಡಲು ಆಗುವುದಿಲ್ಲ ಚಿತ್ರದ ಅರ್ಧ ಪಾರ್ಟ್ ನಾನು ಥಿಯೇಟರ್‌ನಲ್ಲೇ ರಿವೀಲ್ ಮಾಡುವುದು. ಸಿನಿಮಾದಲ್ಲಿ ಏನೋ ಒಂದು ಅಂಶವಿದೆ. ಅದನ್ನು ಥಿಯೇಟರ್‌ನಲ್ಲಿಯೇ ನೋಡಬೇಕು ಎಂದರು.

## ವಿಕ್ಟರಿ ವೆಂಕಟೇಶ್–ಕಲ್ಯಾಣ್‌ರಾಮ್ ಹೊಸ ಸಿನಿಮಾ..



ತೆಲುಗಿನ ಹಿಟ್ ಮಿಷನ್ ಎನಿಸಿಕೊಂಡಿರುವ ನಿರ್ದೇಶಕ ಅನಿಲ್ ರವಿಪುಡಿ ಮತ್ತೊಂದು ಮಲ್ಟಿಸ್ಟಾರ್ ಸಿನಿಮಾ ಹೈದ್ರಾಬಾದ್‌ನಲ್ಲಿ ಸೆಟ್ಟೇರಿದೆ. ವಿಕ್ಟರಿ ವೆಂಕಟೇಶ್, ನಂದಮೂರಿ ಕಲ್ಯಾಣ್ ರಾಮ್ ನಾಯಕರಾಗಿ ನಟಿಸುತ್ತಿದ್ದು, ಕೀರ್ತಿ ಸುರೇಶ್ ಮತ್ತು ಕೃತಿ ಶೆಟ್ಟಿ ನಾಯಕಿಯರಾಗಿ ಸಾಥ್ ಕೊಡ್ತಿದ್ದಾರೆ. ನಿರ್ಮಾಪಕ ದಿಲ್ ರಾಜು ಮತ್ತು ಸಿರೀಶ್ ಸ್ಕ್ರಿಪ್ಟ್ ಅನ್ನು ನಿರ್ದೇಶಕ ಅನಿಲ್ ರವಿಪುಡಿ ಮತ್ತು ನಿರ್ಮಾಪಕ ಸಾಹು ಗರಪತಿ ಅವರಿಗೆ ಹಸ್ತಾಂತರಿಸಿದರು. ಅದ್ದೂರಿ ಮುಹೂರ್ತ ಸಮಾರಂಭದಲ್ಲಿ, ವಿಕ್ಟರಿ ವೆಂಕಟೇಶ್, ಕಲ್ಯಾಣ್ ರಾಮ್, ಕೀರ್ತಿ ಸುರೇಶ್ ಮತ್ತು ಕೃತಿ ಶೆಟ್ಟಿ ನಟಿಸಿರುವ ಮೊದಲ ಶಾಟ್‌ಗೆ ಅಲ್ಲು ಅರವಿಂದ್ ಕ್ಲಾಪ್ ಮಾಡಿದರು. ಸುರೇಶ್ ಬಾಬು ಕ್ಯಾಮೆರಾ ಸ್ವಿಚ್ ಗೆ ಚಾಲನೆ ಕೊಟ್ಟರು. ಖ್ಯಾತ ನಿರ್ಮಾಪಕ ಕೆ ರಾಘವೇಂದ್ರ ರಾವ್ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು.

## ಕಾಲಘಟ್ಟ ಇದೇ ತಿಂಗಳ 19ಕ್ಕೆ ತೆರೆಗೆ



ಈ ಹಿಂದೆ ಖಾಲಿ ಡಬ್ಬ ಎಂಬ ಸಿನಿಮಾ ಮಾಡಿದ್ದ ನಿರ್ದೇಶಕ ಕೆ ಪ್ರಕಾಶ್ ಅಂಬಳೆ ಈಗ ಕಾಲಘಟ್ಟ ಎಂಬ ಹೊಸ ಸಿನಿಮಾ ಮೂಲಕ ಪ್ರೇಕ್ಷಕರ ಎದುರು ಬರುತ್ತಿದ್ದಾರೆ. ಇದೇ ತಿಂಗಳ 19ರಂದು ಚಿತ್ರ ತೆರೆಗೆ ಬರ್ತಿದ್ದು, ಈ ಕುರಿತ ಸುದ್ದಿ ಗೋಷ್ಠಿಯಲ್ಲಿ ನಾಯಕ ಅಭಿದಾಸ್ ಮಾತನಾಡಿ, ಕಾಲಘಟ್ಟ ಸಿನಿಮಾದಲ್ಲಿ ಹೀರೋ ಆಗಿ ನಟನೆ ಮಾಡಿದ್ದೇನೆ. ಪಾತ್ರ ತುಂಬಾ ವಿಭಿನ್ನವಾಗಿದೆ. 1995 ಹಾಗೂ 2025ರಲ್ಲಿ ಎರಡು ಟೈಮ್‌ನಲ್ಲಿ ನಡೆಯುವ ಕಥೆ. ನನ್ನದು 1990ರಲ್ಲಿ ಬರುವ ಪಾತ್ರ. ಮೊದಲ ಬಾರಿಗೆ ಹಳ್ಳಿ ಹುಡುಗನ ಪಾತ್ರ ಮಾಡಿದ್ದೇನೆ. ಕಿರಾತಕ ಸಿನಿಮಾದಲ್ಲಿ ಯಶ್ ಸರ್ ಮಾಡಿರುವ ಪಾತ್ರದ ರೆಫರೆನ್ಸ್ ತರ ಇದೆ. ನನ್ನ ಪಾತ್ರ ಚೆನ್ನಾಗಿ ಬಂದಿದೆ ಎಂದುಕೊಳ್ಳುತ್ತೇನೆ. ನಿರ್ಮಾಪಕರು ಕೃಷಿಕರು. ಅವರಿಗೆ ಸಿನಿಮಾ ಮೇಲೆ ಆಸಕ್ತಿ ಬಂದಿರುವುದು ಖುಷಿ ವಿಚಾರ. ನಿಮ್ಮಂತವರು ಇಂಡಸ್ಟ್ರಿಗೆ ಬೇಕು ಎಂದರು.

## ಜುಲೈ 3ರಂದು ಲವ್ ಸೀಸನ್ಸ್

ಇದೇ ಜುಲೈ 3ರಂದು ಕೃತ್ವಿಕ್ ನಿರ್ದೇಶನದ ಲವ್ ಸೀಸನ್ಸ್ ಚಿತ್ರ ರಾಜ್ಯಾದ್ಯಂತ ತೆರೆ ಕಾಣಲಿದೆ. ಬಿಡುಗಡೆಗಾಗಿ ತಯಾರಾಗುತ್ತಿರುವ ಚಿತ್ರತಂಡವೀಗ ಬಿಡುಗಡೆಗೊಂಡಿರುವ ಮೂರು ಹಾಡುಗಳಿಗೆ ಕೇಳುಗರ ಕಡೆಯಿಂದ ಸಿಗುತ್ತಿರೋ ಭರಪೂರ ಪ್ರತಿಕ್ರಿಯೆ ಕಂಡು ಖುಷಿಗೊಂಡಿದೆ. ಈ ಪ್ರತಿಕಾಗೋಷ್ಠಿಯಲ್ಲಿ ನಿರ್ಮಾಪಕರಾದ ಎನ್.ಆರ್ ಮಂಜುನಾಥ್ (ನೀಲೇರಿ), ನಿರ್ದೇಶಕ ಕೃತ್ವಿಕ್, ಹಿರಿಯ ಗೀತಸಾಹಿತಿ ಕೆ. ಕಲ್ಯಾಣ್, ಸಂಗೀತ ನಿರ್ದೇಶಕ ವೀರ್ ಸಮರ್ಥ್, ಗೀತ ರಚನೆಕಾರರಾದ ಪ್ರಮೋದ್ ಮರವಂತೆ, ಸಾಯಿ ಸರ್ವೇಶ್, ನಾಯಕ ಮುಕುಂದ ರಾಮಸ್ವಾಮಿ, ನಾಯಕಿಯರು ಶ್ವೇತಾ ಕೊಗ್ಗೂರ್, ದಿಯಾ ಕೀರ್ತಿ, ಗಾಯಕಿ ಪ್ರಜ್ಞಾ ಮರಾಠೆ ಉಪಸ್ಥಿತರಿದ್ದರು.




## ಸೆಲೆಬ್ರಿಟಿಗಳಿಂದ 'ಪತ್ತೇದಾರಿ' ಪೋಸ್ಟರ್

ಎ.ಕೆ ಪ್ರೊಡಕ್ಷನ್ಸ್ ಲಾಂಛನದಲ್ಲಿ ಮೊಹಮ್ಮದ್ ಅತೀಕ್ ನಿರ್ಮಾಣ ಮಾಡುತ್ತಿರುವ, ಶ್ರೀನಿವಾಸ್ ಜಯರಾಮ್ ರಚನೆ & ನಿರ್ದೇಶನದ ಹಾಗೂ ಕಿರ್ಫಾರ್ ಎಂಬ ನೂತನ ಪ್ರತಿಭೆ ನಾಯಕನಾಗಿ ನಟಿಸುತ್ತಿರುವ "ಪತ್ತೇದಾರಿ" ಚಿತ್ರದ ಪೋಸ್ಟರ್ ಅನಾವರಣ ಸಮಾರಂಭ ಇತ್ತೀಚೆಗೆ ಕಲಾವಿದರ ಸಂಘದಲ್ಲಿ ಅದ್ದೂರಿಯಾಗಿ ನೆರವೇರಿತು. ಕಲಾವಿದರಾದ ಮಯೂರ್ ಪಟೇಲ್, ದೀಪಕ್, ಕಾಕ್ರೋಜ್ ಸುಧೀ, ಚೆಲುವರಾಜ್, ಅರವಿಂದ್, ಗಿರೀಶ್ ಜತ್ತಿ, ನಟಿ "ಭೀಮ' ಖ್ಯಾತಿಯ ಪ್ರಿಯ, ಕೆ.ಜಿ. ಎಫ್" ರೆಡ್ಡಿ, ವಿಕ್ಟರಿ ವಾಸು, ನಿರ್ದೇಶಕ ಸಹನ ಮೂರ್ತಿ, ಪತ್ರಕರ್ತ ಹಾಗೂ ನಿರೂಪಕ ಹರೀಶ್ ನಾಗರಾಜ್ ಮುಂತಾದವರು ಸಮಾರಂಭಕ್ಕೆ ಆಗಮಿಸಿ "ಪತ್ತೇದಾರಿ" ಚಿತ್ರದ ಪೋಸ್ಟರ್ ಅನಾವರಣ ಚಿತ್ರ ಯಶಸ್ವಿಯಾಗಲೆಂದು ಹಾರೈಸಿದರು. ಕಿರ್ಫಾರ್ ಅವರ ಜೊತೆಗೆ ಗಿರಿ, ರೂಪ ಹಾಗೂ ಸಿದ್ದೇಶ್ ಅವರು ಪ್ರಮುಖ ಪಾತ್ರಗಳಲ್ಲಿ ಅಭಿನಯಿಸುತ್ತಿದ್ದಾರೆ.











KARAVALI THARANGINI Weekly Owned, Editor, Published & Printed by Lalithasri Preetham Rai No.2-64/54(12), Pushparaj Nilaya, Jayanagara, 3rd 'A' Maroli Village, Dakshina Kannada, Karnataka - 575005.
email: karavalitharangini@gmail.com, web: karavalitharangini.com ph: 9880109212 Printed at Bhima Samskruthi Printers & Publishers, No 1182 14th Main Road Prakash Nagar, Bengaluru Karnataka-560021